## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ತಾಲ್ಲೂಕು, ತುದೂರು-ಮುಂಡುವಳ್ಳಿ ಗ್ರಾಮಗಳ ನಡುವೆ ತುಂಗಾ ನದಿಗೆ ಹೊಸ ಸೇತುವೆ ನಿರ್ಮಾಣ (ಗ್ರಾಮೀಣ ರಸ್ತೆ ಸಂಪರ್ಕ ಸೇತುವೆ) ಹಾಗೂ ಶಿವಮೊಗ್ಗ ಜಿಲ್ಲೆ ಹೊಸನಗರ ತಾಲ್ಲೂಕು ಕಾರಣಗಿರಿ-ಬಪ್ಪನಮನೆ ಸಂಪರ್ಕ ರಸ್ತೆಯ ಶರಾವತಿ ಹಿನ್ನೀರಿನ ಬಿಲ್ಲಾಗರದಲ್ಲಿ ಸೇತುವೆ ನಿರ್ಮಾಣ ಕಾಮಗಾರಿಗಳನ್ನು (ಗ್ರಾಮೀಣ ರಸ್ತೆ ಸಂಪರ್ಕ ಸೇತುವೆ) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಕೈಗೊಳ್ಳಲು ರೂ.49.97 ಕೋಟಿಗಳ ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:-1.ಸರ್ಕಾರದ ಆದೇಶ ಸಂಖ್ಯೆ. ಲೋಇ ಇ-104 ಇಎಪಿ 2022, ದಿ: 20-06-2022.
2.ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಡಿಸಿಎಲ್ ರವರ ಪತ್ರ ಸಂಖ್ಯೆ. ಕರಅನಿನಿ/ ವ್ಯನಿ/ಸೇತುವೆ/ತೀರ್ಥಹಳ್ಳಿ/2022-23, ದಿನಾಂಕ:22-11-2022.

****

ಪ್ರಸ್ತಾವನೆ:-

ಓದಲಾದ (1)ರ ಆದೇಶದಲ್ಲಿ ರಾಜ್ಯದ ಪ್ರಮುಖ 56 ಸೇತುವೆಗಳ ನಿರ್ಮಾಣ ಕಾಮಗಾರಿಗಳನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಕೈಗೆತ್ತಿಕೊಳ್ಳಲು ಯೋಜನಾ ವರದಿ ತಯಾರಿಸಲು ಸೇತುವೆಗಳ ಕಾರ್ಯಕ್ರಮ ಪಟ್ಟಿಗೆ ಅನುಮೋದನೆ ನೀಡಲಾಗಿದ್ದು, ಪ್ರಸ್ತಾಪಿತ ಎರಡು ಸೇತುವೆಗಳು ಸದರಿ ಅನುಮೋದಿತ ಸೇತುವೆಗಳ ಕಾರ್ಯಕ್ರಮ ಪಟ್ಟಿಯ ಕ್ರಮ. ಸಂ.42 ಹಾಗೂ 49 ರಲ್ಲಿ ಸೇರಿರುತ್ತದೆ.

ಉದ್ದೇಶಿತ ಸೇತುವೆ ನಿರ್ಮಾಣ ಕಾಮಗಾರಿಗಳ ವಿವರ ಮತ್ತು ಅಂದಾಜು ಮೊತ್ತ ಈ ಕೆಳಕಂಡಂತಿರುತ್ತವೆ;

| ಕ್ರ.ಸಂ | ಕಾಮಗಾರಿಯ ಹೆಸರು | ಸೇತುವೆಯ ಉದ್ದ | ಅಂದಾಜು ಮೊತ್ತ (ರೂ.ಕೋಟಿಗಳಲ್ಲಿ) |
|---|---|---|---|
| 1 | ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ತಾಲ್ಲೂಕು ತೂದೂರು-ಮುಂಡುವಳ್ಳಿ ಗ್ರಾಮಗಳ ನಡುವೆ ತುಂಗಾ ನದಿಗೆ ಹೊಸ ಸೇತುವೆ ನಿರ್ಮಾಣ. (ಗ್ರಾಮೀಣ ರಸ್ತೆ ಸಂಪರ್ಕ ಸೇತುವೆ) | 200 ಮೀ | 25.61 |
| 2 | ಶಿವಮೊಗ್ಗ ಜಿಲ್ಲೆ ಹೊಸನಗರ ತಾಲ್ಲೂಕು ಕಾರಣಗಿರಿ-ಬಪ್ಪನಮನೆ ಸಂಪರ್ಕ ರಸ್ತೆಯ ಶರಾವತಿ ಹಿನ್ನೀರಿನ ಬಿಲ್ಲಾಗರದಲ್ಲಿ ಸೇತುವೆ ನಿಮಾಣ. (ಗ್ರಾಮೀಣ ರಸ್ತೆ ಸಂಪರ್ಕ ಸೇತುವೆ) | 200 ಮೀ | 24.36 |
| **ಒಟ್ಟು ಮೊತ್ತ** | | **400 ಮೀ** | **49.97** |

. . . . . 2

ಸದರಿ ಹಳೆಯ ಸೇತುವೆಗಳು ಶಿಥಿಲಾವಸ್ಥೆಯಲ್ಲಿದ್ದು ಹಾಗೂ ಕಿರಿದಾಗಿರುವುದರಿಂದ ವಾಹನ ಅಪಘಾತಗಳು ಹೆಚ್ಚಾಗಿದ್ದು ಸೇತುವೆಗಳ ಪುನರ್ ನಿರ್ಮಾಣವು ಅತಿ ಅವಶ್ಯಕವಾಗಿರುತ್ತದೆ. ಅಭಿವೃದ್ಧಿಪಡಿಸಲು ಉದ್ದೇಶಿರುವ ಸೇತುವೆಗಳು ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ಕ್ಷೇತ್ರದ ವ್ಯಾಪ್ತಿಯಲ್ಲಿನ ಗ್ರಾಮೀಣ ರಸ್ತೆಗಳಾಗಿರುತ್ತವೆ. ಈ ಸೇತುವೆಗಳನ್ನು ನಿರ್ಮಾಣ ಮಾಡುವುದರಿಂದ ಸುತ್ತಮುತ್ತಲಿನ ಗ್ರಾಮಸ್ಥರಿಗೆ ಸಂಪರ್ಕ ಕಲ್ಪಿಸುವುದಲ್ಲದೇ, ಸುಗಮ / ಸುರಕ್ಷಿತ ಸಂಚಾರಕ್ಕೆ ಅನುವು ಮಾಡಿಕೊಡಬಹುದಾಗಿದ್ದು, ಸ್ಥಳದಲ್ಲಿ ಸಂಭವಿಸಬಹುದಾದ ಅಪಘಾತಗಳನ್ನು ತಡೆಯಬಹುದಾಗಿದೆ.

ಆದ್ದರಿಂದ, ಸದರಿ ಎರಡು ಸೇತುವೆ ನಿರ್ಮಾಣ ಕಾಮಗಾರಿಗಳನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಕೈಗೊಳ್ಳಲು ರೂ.49.97 ಕೋಟಿಗಳ ಅನುದಾನದೊಂದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಡಿಸಿಎಲ್ ರವರು ಓದಲಾದ (2)ರ ಪತ್ರದಲ್ಲಿ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರದಲ್ಲಿ ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಈ ಕೆಳಕಂಡಂತೆ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ; ಲೋಇ ಇ-348 ಇಎಪಿ 2022 ಬೆಂಗಳೂರು, ದಿನಾಂಕ: 15-12-2022</u>**

ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ತಾಲ್ಲೂಕು, ತುದೂರು-ಮುಂಡುವಳ್ಳಿ ಗ್ರಾಮಗಳ ನಡುವೆ ತುಂಗಾ ನದಿಗೆ ಹೊಸ ಸೇತುವೆ ನಿರ್ಮಾಣ (ಗ್ರಾಮೀಣ ರಸ್ತೆ ಸಂಪರ್ಕ ಸೇತುವೆ) ಹಾಗೂ ಶಿವಮೊಗ್ಗ ಜಿಲ್ಲೆ ಹೊಸನಗರ ತಾಲ್ಲೂಕು ಕಾರಣಗಿರಿ-ಬಪ್ಪನಮನೆ ಸಂಪರ್ಕ ರಸ್ತೆಯ ಶರಾವತಿ ಹಿನ್ನೀರಿನ ಬಿಲ್ಲಾಗರದಲ್ಲಿ ಸೇತುವೆ ನಿರ್ಮಾಣ ಕಾಮಗಾರಿಗಳನ್ನು (ಗ್ರಾಮೀಣ ರಸ್ತೆ ಸಂಪರ್ಕ ಸೇತುವೆ) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಲೆಕ್ಕ ಶೀರ್ಷಿಕೆ 5054-80-190-0-01-132 ರಡಿ ರೂ.49.97 ಕೋಟಿಗಳ ಮೊತ್ತದಲ್ಲಿ ಕೈಗೊಳ್ಳಲು ಈ ಕೆಳಕಂಡ ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

1. ಪ್ರಸ್ತಾಪಿತ ಕಾಮಗಾರಿಯು ಬೇರೆ ಯಾವುದೇ ಇಲಾಖೆಯ ಕಾರ್ಯಕ್ರಮಗಳ ಕ್ರಿಯಾ ಯೋಜನೆಯಲ್ಲಿ ಸೇರ್ಪಡೆಯಾಗದಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು ಹಾಗೂ ಲಭ್ಯವಿರುವ ಅನುದಾನದ ಮಿತಿಯೊಳಗೆ ಕಾಮಗಾರಿಗಳನ್ನು ಮುಕ್ತಾಯಗೊಳಿಸತಕ್ಕದ್ದು, ಯಾವುದೇ ಕಾರಣದಿಂದಲೂ ಹೆಚ್ಚುವರಿ ಅನುದಾನಕ್ಕೆ ಹಾಗೂ ಬದಲಿ ಕಾಮಗಾರಿಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದಲ್ಲ.

2. ಯೋಜನೆಯಲ್ಲಿನ ಕಾಮಗಾರಿಗೆ ಅಂದಾಜನ್ನು ಸಿದ್ಧಪಡಿಸಿಕೊಂಡು ಸಕ್ಷಮ ಪ್ರಾಧಿಕಾರದ ತಾಂತ್ರಿಕ ಅನುಮೋದನೆಯೊಂದಿಗೆ ಕಾಮಗಾರಿಯನ್ನು ಕೈಗೊಳ್ಳತಕ್ಕದ್ದು ಹಾಗೂ ಅನುಮೋದಿತ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖಾ ಸಂಹಿತೆ ಪ್ರಕಾರ ನಿರ್ವಹಿಸಲು ಕ್ರಮವಹಿಸತಕ್ಕದ್ದು.

3. ಕಾಮಗಾರಿಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪಾರದರ್ಶಕ ಅಧಿನಿಯಮ ಮತ್ತು ನಿಯಮಗಳ ಅಡಿಯಲ್ಲಿ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ. ಸಿಆಸುಇ 2 ಸಂಗ್ರ 2009, ದಿನಾಂಕ: 09-10-2012 ರ ಪ್ರಕಾರ ಟೆಂಡರ್ ಕರೆದು ನಿರ್ವಹಣೆಗೆ ಕ್ರಮ ವಹಿಸತಕ್ಕದ್ದು.

. . . . . 3

ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 584 ಆಕೋ–2/2022 (ಇ–ಆಫೀಸ್), ದಿನಾಂಕ: 23–11–2022 ರನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

15/12/2022

**(ರಾಮಚಂದ್ರಪ್ಪ ಕೆ.ಎನ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಬಾಹ್ಯ ಅನುದಾನಿತ ಯೋಜನೆಗಳು (ಇಎಪಿ)
ಲೋಕೋಪಯೋಗಿ ಇಲಾಖೆ

ಗೆ,
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು.

**ಪ್ರತಿಯನ್ನು :–**

1. ಮಹಾಲೇಖಪಾಲರು (ಅಕೌಂಟ್ಸ್) ಕರ್ನಾಟಕ, ಬೆಂಗಳೂರು.
2. ಸನ್ಮಾನ್ಯ ಮುಖ್ಯ ಮಂತ್ರಿಯವರ ಅಪರ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಸರ್ಕಾರದ ಮುಖ್ಯ ಕಾರ್ಯದರ್ಶಿ ರವರ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನ ಸೌಧ, ಬೆಂಗಳೂರು ರವರಿಗೆ ದಿನಾಂಕ 08–12–2022 ರಂದು ನಡೆದ ಸಚಿವ ಸಂಪುಟದ ಕಾರ್ಯ ಸೂಚಿ ಕ್ರಮ ಸಂಖ್ಯೆ. 23 ಹಾಗೂ ಪ್ರಕರಣ ಸಂಖ್ಯೆ. ಸಿ:675/2022 ರನ್ವಯ ಹೊರಡಿಸಿ ಸಲ್ಲಿಸಲಾಗಿದೆ.
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ, (ಆರ್ಥಿಕ ಕೋಶ) ಲೋಕೋಪಯೋಗಿ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸರ್ಕಾರದ ಉಪಕಾರ್ಯದರ್ಶಿ, (ಸಂ ಮತ್ತು ಕ), ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
11. ಜಂಟಿ ನಿರ್ದೇಶಕರು, ಸ್ಟೇಟ್ ಹುಜೂರು ಟ್ರೆಷರಿ, ಕೆ.ಆರ್ ಸರ್ಕಲ್, ಬೆಂಗಳೂರು.
12. ಪ್ರಧಾನ ಇಂಜಿನಿಯರ್, PRAMC, ಲೋಕೋಪಯೋಗಿ ಇಲಾಖೆ, ಕೆ.ಆರ್ ವೃತ್ತ, ಬೆಂಗಳೂರು ರವರಿಗೆ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
13. ಕಡತ / ಹೆಚ್ಚುವರಿ ಪ್ರತಿಗಳು.